ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1872
ಮಾನ್ಯ ಸದಸ್ಯರ ಹೆಸರು	:	ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	22-03-2021
ಉತ್ತರಿಸುವ ಸಚಿವರು	:	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಗ್ರಾಮೀಣ ಪ್ರದೇಶಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ನಗರಗಳಂತೆ ದಿನದ 24 ಗಂಟೆಯೂ ಗ್ರಾಮೀಣ ಜನತೆಗೆ ಆರೋಗ್ಯ ಸೇವೆ ನೀಡುವ ಚಿಂತನೆ ಸರ್ಕಾರಕ್ಕಿದೆಯೇ;</td><td>ಹೌದು.</td></tr>
<tr><td>ಆ</td><td>ಹಾಗಿದ್ದಲ್ಲಿ, ಗ್ರಾಮೀಣ ಪ್ರದೇಶದ ಜನತೆ ತಾಲ್ಲೂಕು ಆಸ್ಪತ್ರೆಗಳಿಗೆ, ಜಿಲ್ಲಾ ಆಸ್ಪತ್ರೆಗಳಿಗೆ ಅಲೆದಾಡುವುದನ್ನು ತಪ್ಪಿಸುವ ನಿಟ್ಟಿನಲ್ಲಿ ಗ್ರಾಮೀಣ ಆಸ್ಪತ್ರೆಗಳನ್ನು ಉನ್ನತೀಕರಿಸುವ ಯಾವ ಯಾವ ಯೋಜನೆಗಳನ್ನು ಸರ್ಕಾರ ಹಮ್ಮಿಕೊಂಡಿದೆ; (ವಿವರ ಒದಗಿಸುವುದು)</td><td>2021-21ರ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಹೆಚ್ಚು ಕಾರ್ಯ ಒತ್ತಡವಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಹೆಚ್ಚುವರಿ ಸೇವೆಗಳನ್ನು ಹಾಗೂ ಅತ್ಯಾಧುನಿಕ ಸೌಲಭ್ಯಗಳನ್ನು ನೀಡುವ ಉದ್ದೇಶದಿಂದ ಅವುಗಳನ್ನು ಹಂತ ಹಂತವಾಗಿ ಮಾದರಿ ಪ್ರಾಥಮಿಕ ಕೇಂದ್ರಗಳಾಗಿ ಮೇಲ್ದರ್ಜೆಗೇರಿಸಲಾಗುವುದು. 2021-22ನೇ ವರ್ಷದಲ್ಲಿ ಅಗತ್ಯ ಸಲಕರಣೆಗಳನ್ನು ಒದಗಿಸಿ ಮತ್ತು ಮಾನವ ಸಂಪನ್ಮೂಲಗಳನ್ನು ಮರುಹೊಂದಿಸಿ 250 ಮಾದರಿ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗುವುದು.</td></tr>
<tr><td>ಇ</td><td>ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಗ್ರಾಮೀಣ ಪ್ರಾಥಮಿಕ ಆಸ್ಪತ್ರೆಗಳಿವೆ; ಅವುಗಳಿಗೆ ಮಂಜೂರಾದ ಒಟ್ಟು ವೈದ್ಯರ ಹುದ್ದೆಗಳೆಷ್ಟು; ಅವುಗಳಲ್ಲಿ ಭರ್ತಿಯಾಗಿ ಕಾರ್ಯನಿರ್ವಹಿಸುತ್ತಿರುವ ವೈದ್ಯರುಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; (ಸಂಪೂರ್ಣ ವಿವರ ಒದಗಿಸುವುದು)</td><td>ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 139 ಗ್ರಾಮೀಣ ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ.
<table><tr><th>ಮಂಜೂರು</th><th>ಕಾರ್ಯ ನಿರತ</th><th>ಗುತ್ತಿಗೆ</th><th>ಖಾಲಿ</th></tr><tr><td>139</td><td>50</td><td>58</td><td>31</td></tr></table></td></tr>
<tr><td>ಈ</td><td>ಗ್ರಾಮೀಣ ಪ್ರದೇಶಗಳಲ್ಲಿ ವೈದ್ಯರುಗಳನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಏನೆಲ್ಲಾ ಕ್ರಮಗಳನ್ನು ಸರ್ಕಾರ ತೆಗೆದುಕೊಂಡಿದೆ;</td><td>ವೈದ್ಯರುಗಳಿಗೆ ವಿಶೇಷ ಭತ್ಯೆ ನೀಡುವುದರ ಮೂಲಕ ಗ್ರಾಮೀಣ ಪ್ರದೇಶಗಳಲ್ಲೇ ಉಳಿಸಿಕೊಳ್ಳಲು ಕ್ರಮಕೈಗೊಳ್ಳಲಾಗಿದೆ.</td></tr>
<tr><td>ಉ</td><td>ಗ್ರಾಮೀಣ ಪ್ರದೇಶಗಳ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಯಾವ ಕಾಲಮಿತಿಯಲ್ಲಿ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗುವುದು?</td><td>ಅನುದಾನ ಲಭ್ಯತೆ ಆಧಾರಿಸಿ ಹಂತಹಂತವಾಗಿ ಮೇಲ್ದರ್ಜೆಗೇರಿಸಲಾಗುವುದು.</td></tr>
</table>

ಆಕುಕ 62 ಎಸ್‌ಬಿವಿ 2021.

(ಡಾ॥ ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು